ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 29–11–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಮಾಜಿ ಮುಖ್ಯಮಂತ್ರಿ ದಿವಂಗತ ಕೆಂಗಲ್ ಹನುಮಂತಯ್ಯನವರ 34 ನೇ ಪುಣ್ಯ ತಿಥಿ ಅಂಗವಾಗಿ ಅವರ ಪ್ರತಿಮೆ ಬಳಿ ಭಾವಚಿತ್ರಕ್ಕೆ ಮಾಲಾರ್ಪಣೆ<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ | 1–12–2014<br>ಸೋಮವಾರ<br>ಬೆಳಗ್ಗೆ<br>9–30<br>ಗಂಟೆಗೆ | ವಿಧಾನ ಸೌಧದ ಪಶ್ಚಿಮ ದಿಕ್ಕಿನಲ್ಲಿರುವ ದಿವಂಗತ ಕೆಂಗಲ್ ಹನುಮಂತಯ್ಯ ಅವರ ಪ್ರತಿಮೆ ಬಳಿ |
| 2 | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸಲಾಗುತ್ತಿರುವ ಸಮೀಕ್ಷೆ ಬಗ್ಗೆ ನಾಡಿನ ಪ್ರಮುಖ ಸಾಹಿತಿಗಳು, ಕಲಾವಿದರು ಹಾಗೂ ಬುದ್ಧಿಜೀವಿಗಳೊಂದಿಗೆ ಚರ್ಚಿಸಲು ಸಭೆ<br><br>ಅಧ್ಯಕ್ಷತೆ:<br><br>ಶ್ರೀ ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಖಾತೆ ಸಚಿವರು | 1–12–2014<br>ಸೋಮವಾರ<br>ಬೆಳಗ್ಗೆ<br>10–00<br>ಗಂಟೆಗೆ | ಕೊಠಡಿ ಸಂಖ್ಯೆ 317<br>ಸಮ್ಮೇಳನ ಸಭಾಂಗಣ,<br>ಮೂರನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |
| 3 | **Census Data Dissemination Workshop -2014**<br>**Inauguration:**<br><br>**Dr. Rajkumar Khatri,**<br>**Principal Secretary**<br>**Education Department, GOK**<br><br>**Chief Guest:**<br><br>**Shri T.K. Anilkumar,** | **1-12-2014**<br>**Monday**<br>**10-00 A.M.** | **Mahatma Gandhi Auditorium,**<br>**Institute for Social Economic Changes**<br>**Bangalore.** |

| | | | |
|---|---|---|---|
| | **Secretary, Urban Development Department, GOK** | | |
| 4 | ಪದ್ಮಶ್ರೀ ಪುರಸ್ಕೃತ ಹಿರಿಯ ಕಲಾವಿದ ಶ್ರೀ ಕೆ.ಜಿ. ಸುಬ್ರಮಣ್ಯನ್ ಅವರಿಗೆ ಕರ್ನಾಟಕ ಲಲಿತಕಲಾ ಅಕಾಡೆಮಿಯಿಂದ ಗೌರವ ಸನ್ಮಾನ: | 1-12-2014 ಸೋಮವಾರ ಬೆಳಗ್ಗೆ 11-00 ಗಂಟೆಗೆ | ವರ್ಣ ಗ್ಯಾಲರಿ, ಕರ್ನಾಟಕ ಲಲಿತಕಲಾ ಅಕಾಡೆಮಿ, ಎರಡನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು |
| 5 | ಪತ್ರಿಕಾಗೋಷ್ಠಿ:<br>ಶ್ರೀ ಎಂ.ಬಿ. ಪಾಟೀಲ್<br>ಜಲಸಂಪನ್ಮೂಲ ಸಚಿವರು, | 1-12-2014 ಸೋಮವಾರ ಬೆಳಗ್ಗೆ 11-30 ಗಂಟೆಗೆ | ಕೊಠಡಿ ಸಂಖ್ಯೆ 344, ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು |
| 6 | ಪತ್ರಿಕಾಗೋಷ್ಠಿ:<br>ಶ್ರೀ ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಖಾತೆ ಸಚಿವರು | 1-12-2014 ಸೋಮವಾರ ಬೆಳಗ್ಗೆ 12-30 ಗಂಟೆಗೆ | ಕೊಠಡಿ ಸಂಖ್ಯೆ 317 ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಕಾಸ ಸೌಧ, ಬೆಂಗಳೂರು |
| 7 | ಪತ್ರಿಕಾಗೋಷ್ಠಿ:<br>ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ<br>ಬೆಂಗಳೂರು | 1-12-2014 ಸೋಮವಾರ ಬೆಳಗ್ಗೆ 12-30 ಗಂಟೆಗೆ | ಬೆಂಗಳೂರು ಪ್ರೆಸ್‌ಕ್ಲಬ್ ಕಬ್ಬನ್ ಉದ್ಯಾನವನ ಬೆಂಗಳೂರು |

ನಿರ್ದೇಶಕರ ಪರವಾಗಿ

## <u>ಪತ್ರಿಕಾ ಪ್ರಕಟಣೆ</u>

# ಚುನಾವಣೆ ನಡೆಯುವ ಪ್ರದೇಶಗಳಿಗೆ ಸಾರ್ವಜನಿಕ ರಜೆ

ಬೆಂಗಳೂರು, 29 ನೇ ನವೆಂಬರ್ (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಡಿಸೆಂಬರ್ 5 ಶುಕ್ರವಾರದಂದು ಸ್ಥಳೀಯ ಸಂಸ್ಥೆಗಳ ಸದಸ್ಯಸ್ಥಾನಕ್ಕೆ ಚುನಾವಣೆ ನಡೆಯಲಿದ್ದು ಚುನಾವಣೆ ನಡೆಯುವ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಲ್ಲ ರಾಜ್ಯ ಸರ್ಕಾರಿ ಕಚೇರಿಗಳಿಗೆ ಕೇಂದ್ರ ಸರ್ಕಾರದ ಕಚೇರಿಗಳಿಗೂ, ಕೇಂದ್ರ ಹಾಗೂ ರಾಜ್ಯ ಸರ್ಕಾರಿ ಕಾರ್ಖಾನೆ, ಶಿಕ್ಷಣ ಸಂಸ್ಥೆಗಳಿಗೆ ಎಲ್ಲ ಶಾಲಾ, ಕಾಲೇಜುಗಳಿಗೆ ಸೀಮಿತಗೊಳಿಸಿ ರಾಜ್ಯ ಸರ್ಕಾರ ಸಾರ್ವತ್ರಿಕ ರಜೆಯನ್ನು ಘೋಷಿಸಿದೆ. ಈ ರಜೆ ತುರ್ತು

ಸೇವೆಗಳಿಗೆ ಅನ್ವಯಿಸುವುದಿಲ್ಲ. ಈ ಚುನಾವಣಾ ಕಾರ್ಯಕ್ಕೆ ನಿಯೋಜಿಸಲ್ಪಟ್ಟ ಎಲ್ಲ ಸರ್ಕಾರಿ ನೌಕರರು, ಸದರಿ ದಿನಾಂಕದಂದು ಚುನಾವಣಾ ಕರ್ತವ್ಯದಲ್ಲಿ ಹಾಜರಾಗಬೇಕು.

ಮತದಾನ ನಡೆಯುವ ಮತಗಟ್ಟೆಗಳನ್ನು ಸರ್ಕಾರಿ ಕಛೇರಿಗಳಲ್ಲಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಸ್ಥಾಪಿಸಿದ್ದಲ್ಲಿ ಮಾತ್ರ ಅಂತಹ ಕಚೇರಿ, ಶಾಲೆಗಳಿಗೆ ಡಿಸೆಂಬರ್ 4ರ ಗುರುವಾರ ಮತ್ತು ಮತ ಎಣಿಕೆಯ ದಿನದಂದು ಮತ ಎಣಿಕೆ ನಡೆಯುವ ಕೇಂದ್ರಸ್ಥಾನದಲ್ಲಿ ಮಾತ್ರ ರಜಾ ಘೋಷಿಸಲು ಸಂಬಂಧಪಟ್ಟ ಚುನಾವಣಾಧಿಕಾರಿಗಳು ಕ್ರಮ ಕೈಗೊಳ್ಳುವರು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪ್ರಕಟಣೆ ತಿಳಿಸಿದೆ.

ಬಾಬು/ಕೆಎಂ

## <u>ಮತದಾನ ದಿನವಾದ ಡಿಸೆಂಬರ್ 5 ರಂದು</u>
## <u>ಕಾರ್ಮಿಕರಿಗೆ ಮತದಾನಕ್ಕೆ ಅನುವು ಮಾಡಿಕೊಡಿ</u>

<u>ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ)</u>

ಸ್ಥಳೀಯ ಸಂಸ್ಥೆಗಳಿಗೆ ಮತದಾನ ದಿನವಾದ ಡಿಸೆಂಬರ್ 5 ರಂದು ಮತದಾನ ನಡೆಯುವ ಕ್ಷೇತ್ರಗಳಲ್ಲಿ ಮಾತ್ರ ಮತ ಚಲಾಯಿಸಲು ಅನುಕೂಲವಾಗುವಂತೆ ಕಾರ್ಮಿಕರಿಗೆ ಸಂವಿಧಾನಾತ್ಮಕ ಮತದಾನದ ಹಕ್ಕನ್ನು ಚಲಾಯಿಸಲು ಅನುವು ಮಾಡಿಕೊಡುವಂತೆ ರಾಜ್ಯ ಕಾರ್ಮಿಕ ಆಯುಕ್ತರು ಕಾರ್ಖಾನೆಗಳು ಹಾಗೂ ಕೈಗಾರಿಕಾ ಸಂಸ್ಥೆಗಳ ಮಾಲೀಕರು ಮತ್ತು ಮುಖ್ಯಸ್ಥರಿಗೆ ತಿಳಿಸಿದ್ದಾರೆ.

ಬಾಬು/ಕೆಎಂ

## ಡಾ: ರಾಜ್‌ಕುಮಾರ್ ಕನ್ನಡ ನಾಡಿನ ಸಾಂಸ್ಕೃತಿಕ ರಾಯಭಾರಿ

– ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ

<u>ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ)</u>

ಡಾ: ರಾಜ್‌ಕುಮಾರ್ ಅವರಿಗೆ ಅವರೇ ಸಾಟಿ. ಅವರು ಕನ್ನಡ ನಾಡಿನ ಸಾಂಸ್ಕೃತಿಕ ರಾಯಭಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಣ್ಣಿಸಿದರು.

ನಗರದ ಶ್ರೀ ಕಂಠೀರವ ಸ್ಟುಡಿಯೋ ಆವರಣದಲ್ಲಿ ನಿರ್ಮಿಸಲಾಗಿರುವ ಡಾ. ರಾಜ್‌ಕುಮಾರ್ ಸ್ಮಾರಕವನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು ಡಾ. ರಾಜ್‌ಕುಮಾರ್ ಅವರು ನೆಲ, ಭಾಷೆ, ಸಂಸ್ಕೃತಿ ಬಗ್ಗೆ ಕಾಳಜಿ, ಗೌರವ ಹೊಂದಿದ್ದರು. ಅವರ ಬದುಕು, ನಡೆ, ನುಡಿ, ಜೀವನ ಪ್ರತಿಯೊಬ್ಬ ಕನ್ನಡಿಗನಿಗೂ ಆದರ್ಶವಾಗಿದೆ ಎಂದು ಅಭಿಪ್ರಾಯಪಟ್ಟರು.

ಡಾ. ರಾಜ್‌ಕುಮಾರ್ ಅವರ ನೇತ್ರದಾನದಿಂದ ಪ್ರೇರಿತರಾಗಿ ತಾವೂ ನೇತ್ರದಾನ ಮಾಡುವುದಾಗಿ ಮುಖ್ಯಮಂತ್ರಿಗಳು ಪ್ರಕಟಿಸಿದರು. ಅಲ್ಲದೆ ಘೋಷಣಾ ಪತ್ರಕ್ಕೂ ಈ ಸಂದರ್ಭದಲ್ಲಿ ಸಹಿ ಮಾಡಿದರು.

ಹಿರಿಯ ನಟಿ ಡಾ. ಬಿ. ಸರೋಜಾದೇವಿ ಅವರು ಮಾತನಾಡಿ ನಾನು ಬಹಳ ನಟರೊಂದಿಗೆ ನಟಿಸಿದ್ದೇನೆ. ಆದರೆ ರಾಜ್ ಅವರಂತಹ ಸರಳ ಜೀವಿಯನ್ನು ನೋಡಿಲ್ಲ. ರಾಜ್ ಅಣ್ಣಾವ್ರು ಇಷ್ಟು ಎತ್ತರಕ್ಕೆ ಬೆಳೆಯಲು ಅವರ ಪತ್ನಿ ಪಾರ್ವತಮ್ಮ ಅವರೇ ಕಾರಣ. ಅವರ ಅಗತ್ಯವನ್ನು ತುಂಬ ಮುತುವರ್ಜಿ ವಹಿಸಿ ಪೂರೈಸುತ್ತಿದ್ದರು ಎಂದು ತಿಳಿಸಿದರು. ಹಾಗೆಯೇ ತಾವು ರಾಜ್ ಅವರೊಂದಿಗೆ ನಟಿಸಿದ ಭಾಗ್ಯವಂತರು, ಅಣ್ಣತಂಗಿ, ನ್ಯಾಯವೇ ದೇವರು ಮುಂತಾದ ಚಿತ್ರಗಳ ಬಗ್ಗೆ ಸ್ಮರಿಸಿದರು.

ಡಾ: ರಾಜ್‌ಕುಮಾರ್ ಅವರ ಅಭಿಮಾನಿಗಳಲ್ಲಿ ನಾನು ಒಬ್ಬ ಅಭಿಮಾನಿಯಾಗಿ ಅವರ ಸ್ಮಾರಕ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಆಗಮಿಸುತ್ತಿದ್ದೇನೆ ಎಂದು ತಿಳಿಸಿದ ತಮಿಳು ಮೇರು ನಟ ರಜನೀಕಾಂತ್ ಅವರು, 1927 ರಲ್ಲಿ ಬ್ರಹ್ಮನು ತೇಲಿಬಿಟ್ಟ ಮಳೆಹನಿಯು ಮೋಡದಲ್ಲಿ ಚಲಿಸುತ್ತಾ ಬಂದು ಕನ್ನಡ ನಾಡಿನ ಗಾಜನೂರಿನಲ್ಲಿ ಬಿದ್ದ ಕಾರಣ ಜನಿಸಿದ ಅಪರೂಪದ ಅಶ್ವ ಅವರು. ಹಲವಾರು ಸಾಧು-ಸಂತರು , ಅಸುರರಾದ ಹಿರಣ್ಯ ಕಶ್ಯಪು, ಮಹಿಷಾಸುರ ಹಾಗೂ ಜೇಮ್ಸ್‌ಬಾಂಡ್‌ಗಳೂ ಈ ಅಶ್ವದ ಸವಾರಿ ಮಾಡಿದ್ದಾರೆ. ಇಷ್ಟು ವೈವಿಧ್ಯಮಯ ಪಾತ್ರಗಳಲ್ಲಿ ನಟಿಸುವ ಸಾಮರ್ಥ್ಯ ಅವರೊಬ್ಬರಿಗೇ ಇದೆ. ಅದು ನನ್ನಿಂದಲೂ ಕೂಡ ಸಾಧ್ಯವಿಲ್ಲ. ಭಕ್ತ ಅಂಬರೀಷ್ ಪಾತ್ರವೊಂದರಲ್ಲಿ ಮಾಡಬೇಕೆಂಬ ಅವರ ಆಸೆ ಮಾತ್ರ ಹಾಗೆಯೇ ಉಳಿಯಿತು ಎಂದು ಡಾ. ರಾಜ್‌ಕುಮಾರ್ ಅವರ ಬಾಳ ಹಾದಿಯನ್ನು ತೆರೆದಿಟ್ಟರು. ಶಾಲಾದಿನಗಳಲ್ಲಿ ಡಾ. ರಾಜ್ ಅವರ ಆಟೋಗ್ರಾಫ್ ಪಡೆದುಕೊಂಡಿದ್ದನ್ನು ನೆನೆಪಿಸಿಕೊಂಡ ಅವರು, ನಾನು ಬೇರೆ ಯಾರ ಆಟೋಗ್ರಾಫ್ ಕೂಡ ಪಡೆದಿಲ್ಲ ಎಂದರು.

'ರಾಜ್‌ಕುಮಾರ್ ಸ್ಫೂರ್ತಿ':

ನಟನಾಗಿ ನನಗೆ ಡಾ. ರಾಜ್‌ಕುಮಾರ್ ಅವರೇ ಸ್ಫೂರ್ತಿ ಎಂದ ಖ್ಯಾತ ತೆಲುಗು ನಟ, ಶ್ರೀ ಚಿರಂಜೀವಿ ಅವರು, ರಾಜ್‌ಕುಮಾರ್ ಅವರ ಸರಳತೆ, ಸಜ್ಜನಿಕೆ, ಹೃದಯ ವೈಶಾಲ್ಯವನ್ನು ತುಂಬು ಹೃದಯದಿಂದ ಸ್ಮರಿಸಿಕೊಂಡರು. ತಾವು ಫಿಲ್ಮ್ ಇನ್ಸ್ಟಿಟ್ಯೂಟ್ ವಿದ್ಯಾರ್ಥಿಯಾಗಿ ಡಾ. ರಾಜ್‌ಕುಮಾರ್ ಅವರನ್ನು ಭೇಟಿ ಮಾಡಿದಾಗ ಅವರು ವಿದ್ಯಾರ್ಥಿಗಳೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿದ ಬಗೆಯನ್ನು ವಿವರಿಸಿದ ಶ್ರೀ ಚಿರಂಜೀವಿ, ಸರಳತೆಯಿಂದಲೇ ಶ್ರೇಷ್ಠರಾಗುತ್ತೇವೆ ಎಂಬ ಮಾತಿಗೆ ಡಾ. ರಾಜ್ ಉತ್ತಮ ನಿದರ್ಶನ ಎಂದು ಬಣ್ಣಿಸಿದರು.

ಡಾ. ರಾಜ್‌ಕುಮಾರ್ ಅವರ ಕೊನೆಯ ದಿನಗಳನ್ನು ನೆನಪಿಸಿಕೊಂಡ ಅವರ ಪುತ್ರ ಹಾಗೂ ಡಾ. ರಾಜ್‌ಕುಮಾರ್ ಪ್ರತಿಷ್ಠಾನದ ಸದಸ್ಯ ಶ್ರೀ ರಾಘವೇಂದ್ರ ರಾಜ್‌ಕುಮಾರ್ ಅವರು, 'ಅಪ್ಪಾಜಿ ಇಂದು ನಮ್ಮ ನಡುವೆ ಇಲ್ಲದಿದ್ದರೂ, ದಾನ ಮಾಡಿದ ಅವರ ಕಣ್ಣುಗಳು ಇಂದಿಗೂ ನಮ್ಮನ್ನೆಲ್ಲ ನೋಡುತ್ತಿವೆ' ಎಂದು ಮಾರ್ಮಿಕವಾಗಿ ನುಡಿದರು. ನೇತ್ರದಾನ ಹಾಗೂ ರಕ್ತದಾನ ಮಾಡುವಂತೆ ಅಭಿಮಾನಿಗಳಲ್ಲಿ ವಿನಂತಿಸಿದರು.

ಕೇಂದ್ರ ಕಾನೂನು ಸಚಿವ ಶ್ರೀ ಡಿ.ವಿ. ಸದಾನಂದ ಗೌಡ ಅವರು ಮಾತನಾಡಿ, ಗೋಕಾಕ ಚಳವಳಿಗೆ ಯಶಸ್ವಿ ಚಾಲನೆ ನೀಡಿದ್ದು ಡಾ. ರಾಜ್‌ಕುಮಾರ್ ಅವರೇ ಎಂದು ಸ್ಮರಿಸಿಕೊಂಡರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್‌ಬೇಗ್ ಅವರು ಡಾ. ರಾಜ್‌ಕುಮಾರ್ ಅವರು ಕನ್ನಡದ ಆಸ್ತಿ. ಅವರ ನಟನಾ ಚಾತುರ್ಯದಿಂದ ಎಂತಹ ಪಾತ್ರವನ್ನೂ ನಿಭಾಯಿಸುತ್ತಿದ್ದರು. ಕನ್ನಡದ ಅಭಿಮಾನದಿಂದಾಗಿ ಕನ್ನಡ ಬಿಟ್ಟು ಬೇರೆ ಭಾಷೆಯಲ್ಲಿ

ಅಭಿನಯಿಸಲಿಲ್ಲ. ಡಾ. ರಾಜ್‌ಕುಮಾರ್ ಮತ್ತು ಕನ್ನಡ ಚಿತ್ರರಂಗ ಜೊತೆಯಾಗಿಯೇ ಬೆಳೆದು ಬಂದಿವೆ ಎಂದು ತಿಳಿಸಿದರು. ಮಹಾಲಕ್ಷ್ಮಿಪುರಂ ಶಾಸಕ ಶ್ರೀ ಗೋಪಾಲಯ್ಯ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಾರ್ತಾ ಇಲಾಖೆ ನಿರ್ದೇಶಕ ಎನ್.ಆರ್. ವಿಶುಕುಮಾರ್ ಸ್ವಾಗತಿಸಿದರು. ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಶ್ರೀ ಎಸ್.ವಿ. ರಾಜೇಂದ್ರಸಿಂಗ್ ಬಾಬು ಅವರು ವಂದಿಸಿದರು. ಸಮಾರಂಭದಲ್ಲಿ ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್, ವಸತಿ ಸಚಿವ ಶ್ರೀ ಅಂಬರೀಷ್, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಶ್ರೀ ದಿನೇಶ್ ಗುಂಡೂರಾವ್, ಬೆಂಗಳೂರು ಮಹಾಪೌರರಾದ ಶ್ರೀಮತಿ ಶಾಂತಕುಮಾರಿ, ಶ್ರೀ ಕಂಠೀರವ ಸ್ಟುಡಿಯೋ ಅಧ್ಯಕ್ಷೆ ಶ್ರೀಮತಿ ವಿಜಯಲಕ್ಷ್ಮಿ ಅರಸ್, ವಿಧಾನ ಪರಿಷತ್ ಸದಸ್ಯರಾದ ಶ್ರೀಮತಿ ತಾರಾ ಅನೂರಾಧ, ಶ್ರೀಮತಿ ಜಯಮಾಲ, ಶ್ರೀ ಜಗ್ಗೇಶ್, ಶ್ರೀ ಇ. ಕೃಷ್ಣಪ್ಪ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಗಂಗರಾಜು, ಡಾ. ರಾಜ್‌ಕುಮಾರ್ ಪ್ರತಿಷ್ಠಾನದ ಸದಸ್ಯ ಶ್ರೀ ರಾಕ್‌ಲೈನ್ ವೆಂಕಟೇಶ್, ಶ್ರೀಮತಿ ಪಾರ್ವತಮ್ಮ ರಾಜ್‌ಕುಮಾರ್, ಶ್ರೀ ಶಿವರಾಜ್‌ಕುಮಾರ್, ಶ್ರೀ ಪುನೀತ್ ರಾಜ್‌ಕುಮಾರ್, ಅವರ ಕುಟುಂಬದ ಸದಸ್ಯರು, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಹಾಗೂ ಚಿತ್ರೋದ್ಯಮದ ಗಣ್ಯರು ಉಪಸ್ಥಿತರಿದ್ದರು.

ಸಮ/ಬಾಬು/ಬಿಜಿಪಿ/ಕೆಎಂ

# ಲೆಕ್ಕಪರಿಶೋಧನೆಗೆ ಸೂಚನೆ

ಬೆಂಗಳೂರು, 28 ನೇ ನವೆಂಬರ್ (ಕರ್ನಾಟಕ ವಾರ್ತೆ)

ಬೆಂಗಳೂರು ಜಿಲ್ಲೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಹಕಾರಿಗಳು ಕರ್ನಾಟಕ ಸಹಕಾರ ಸಂಘಗಳ ಕಾಯಿದೆ 2014-15 ನೇ ಸಾಲಿನ ಲೆಕ್ಕಪರಿಶೋಧನೆಯನ್ನು ಆಗಸ್ಟ್ -2015 ರೊಳಗೆ ಕಡ್ಡಾಯವಾಗಿ ಪೂರೈಸಿಕೊಳ್ಳಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯ **http://www.sahakaradarpana.kar.nic.in** ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಅರ್ಹ ಲೆಕ್ಕಪರಿಶೋಧಕರ ಪಟ್ಟಿಯಿಂದ ಒಬ್ಬರನ್ನು ಸಂಘದ 2013-14 ನೇ ಸಾಲಿನ ಮಹಾಸಭೆಯಲ್ಲಿ ಆಯ್ಕೆ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ಮಹಾಸಭೆ ಮುಗಿದ 7 ದಿನಗಳ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರ ಕಚೇರಿ, ಬೆಂಗಳೂರು ಜಿಲ್ಲೆ, ಬೆಂಗಳೂರು ಕೊಠಡಿ ಸಂಖ್ಯೆ : 421, 422 ಒಂದನೇ ಗೇಟ್, 4ನೇ ಮಹಡಿ ಬಹುಮಹಡಿ ಕಟ್ಟಡ, ಡಾ: ಅಂಬೇಡ್ಕರ್ ವೀದಿ ಬೆಂಗಳೂರು -560 001 ಇವರಿಗೆ ಪತ್ರದ ಮೂಲಕ ಅಥವಾ ಕಚೇರಿ ಇಮೇಲ್ ddca_bng_ka@nic.in ಗೆ ಮಾಹಿತಿಯನ್ನು ಸಲ್ಲಿಸಬೇಕಾಗಿದೆ.

ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡು ಈ ಕಛೇರಿಗೆ ತಹಲ್‌ವರೆಗೂ ಮಾಹಿತಿ ಸಲ್ಲಿಸದಿದ್ದಲ್ಲಿ ಈ ಕೂಡಲೇ ವಾರ್ಷಿಕ ಮಹಾಸಭೆಯ ನಡುವಳಿಯ ಪ್ರತಿಯನ್ನು ಕಾರ್ಯದರ್ಶಿ ಹಾಗೂ ಅಧ್ಯಕ್ಷರ ಸಹಿಯೊಂದಿಗೆ ಈ ಕಚೇರಿಗೆ ಮರು ಟಪಾಲಿನಲ್ಲಿ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ತಿದ್ದುಪಡಿಯಾದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 63(2) ರ ಪ್ರಾವಿಸೋದನ್ವಯ

ಪ್ರದತ್ತವಾದ ಅಧಿಕಾರದ ಮೇರೆಗೆ ನೀವು ಲೆಕ್ಕಪರಿಶೋಧನೆಗೆ ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು ನೇಮಕಮಾಡಿಕೊಳ್ಳದೇ ಇರುವುದರಿಂದ ಮತ್ತು ಕರ್ನಾಟಕ ಸಹಕಾರ ಸಹಕಾರ ಸಂಘಗಳ ನಿಯಮ 29-ಬಿ(8) ರನ್ವಯ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡಿರುವ ಬಗ್ಗೆ ಈ ಇಲಾಖೆ ತಿಳಿಯಪಡಿಸದೇ ಇರುವುದರಿಂದ ತಾವು ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡಿರುವುದಿಲ್ಲವೆಂದು ಪರಿಭಾವಿಸಿ, ಇಲಾಖಾವತಿಯಿಂದ ತಮ್ಮ ಸಂಸ್ಥೆಯ ಲೆಕ್ಕಪರಿಶೋಧನೆಗಾಗಿ ಲೆಕ್ಕಪರಿಶೋಧಕರನ್ನು ನೇಮಿಸಲಾಗುವುದೆಂಬುದನ್ನು ಸ್ಪಷ್ಟಪಡಿಸುತ್ತಾ ಈ ಕುರಿತು ನಿಮ್ಮ ಹೇಳಿಕೆ/ಮಾಹಿತಿ ಏನಾದರೂ ಇದ್ದಲ್ಲಿ ಈ ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಚೇರಿಗೆ 03 ದಿನಗಳೊಳಗಾಗಿ ಮಾಹಿತಿ ಸಲ್ಲಿಸಲು ತಿಳಿಯಪಡಿಸಿದೆ. ಇಲ್ಲವಾದಲ್ಲಿ ಈ ಸಂಬಂಧ ನೀವು ತಿಳಿಸಬೇಕಾಗಿರುವುದು ಏನು ಇಲ್ಲವೆಂದು ಪರಿಗಣಿಸಿ ನಿಮ್ಮ ಸಂಸ್ಥೆಯ ಲೆಕ್ಕಪರಿಶೋಧನೆ ನಿರ್ವಹಿಸಲು ಇಲಾಖಾವತಿಯಿಂದ ಲೆಕ್ಕಪರಿಶೋಧಕರನ್ನು ನೇಮಿಸಲಾಗುವುದೆಂಬುದನ್ನು ಸ್ಪಷ್ಟಪಡಿಸಿದೆ.

ಬಾಬು/ಕೆಎಂ